# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 166 |
| ಸದಸ್ಯರ ಹೆಸರು | : | ಶ್ರೀ ಟಿ.ಎ. ಶರವಣ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 10-07-2018 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಉಪ ಮುಖ್ಯಮಂತ್ರಿಯವರು |

****

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಬೆಂಗಳೂರು ಜಲ ಮಂಡಳಿಯಲ್ಲಿ ಕರ್ತವ್ಯ ನಿರ್ವಹಿಸಲು ಅಗತ್ಯವಾಗಿರುವ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳ ಸಂಖ್ಯೆಯ ವಿವರವಾದ ಮಾಹಿತಿ ನೀಡುವುದು;</td><td>ಬೆಂಗಳೂರು ಜಲಮಂಡಳಿಯಲ್ಲಿ ಮಂಜೂರಾಗಿರುವ ಹುದ್ದೆಗಳು ಹಾಗೂ ಖಾಲಿಯಿರುವ ಹುದ್ದೆಗಳ ವಿವರಗಳು ಈ ಕೆಳಕಂಡಂತೆ ಇರುತ್ತವೆ.<br><br>
<table>
<tr><th>ವೃಂದ</th><th>ಮಂಜೂರಾಗಿರುವ ಹುದ್ದೆಗಳ ಸಂಖ್ಯೆ</th><th>ಖಾಲಿಯಿರುವ ಹುದ್ದೆಗಳ ಸಂಖ್ಯೆ</th></tr>
<tr><td>A</td><td>225</td><td>51</td></tr>
<tr><td>B</td><td>307</td><td>121</td></tr>
<tr><td>C</td><td>1924</td><td>837</td></tr>
<tr><td>D</td><td>1018</td><td>434</td></tr>
<tr><td>Total</td><td>3474</td><td>1443</td></tr>
</table></td></tr>
<tr><td>ಆ</td><td>ಸದ್ಯ ಜಲಮಂಡಳಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಗಳಲ್ಲಿ ಪೂರ್ಣಾವಧಿ ಮತ್ತು ಅರೆಕಾಲಿಕ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು;</td><td>ಬೆಂಗಳೂರು ಜಲಮಂಡಳಿಯಲ್ಲಿ ಒಟ್ಟು 2031 ಪೂರ್ಣಾವಧಿ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದಾರೆ. ಅರೆಕಾಲಿಕ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿರುವುದಿಲ್ಲ.</td></tr>
<tr><td>ಇ</td><td>ಖಾಲಿ ಇರುವ ಹುದ್ದೆಗಳ ಪೂರ್ಣಾವಧಿ ನೇಮಕಾತಿಗೆ ಸಂಬಂಧಿಸಿದಂತೆ ಸರ್ಕಾರವು ತೆಗೆದುಕೊಂಡಿರುವ ಅಗತ್ಯ ಕ್ರಮಗಳೇನು:</td><td>ಸರ್ಕಾರದ ದಿನಾಂಕ: 30.6.2017ರ ಪತ್ರದಲ್ಲಿ ಬೆಂಗಳೂರು ಜಲಮಂಡಳಿಯಲ್ಲಿ 211 ಹುದ್ದೆಗಳನ್ನು ಭರ್ತಿ ಮಾಡಲು ಅನುಮೋದನೆ ನೀಡಲಾಗಿರುತ್ತದೆ. ಬೆಂಗಳೂರು ಜಲಮಂಡಳಿಯಲ್ಲಿ ಸ್ಥಳೀಯ (ಹೈ-ಕ) ವೃಂದಕ್ಕೆ ಮೀಸಲಾದ ಸ್ಥಾನಗಳ ಪೈಕಿ ನೇರ ನೇಮಕಾತಿಯ ಖಾಲಿ ಹುದ್ದೆಗಳನ್ನು ತುಂಬಲು ಈ ಕೆಳಕಂಡಂತೆ ಬೆಂಗಳೂರು ಜಲಮಂಡಳಿಯಿಂದ ಕ್ರಮ ವಹಿಸಲಾಗುತ್ತಿದೆ:<br><br>❖ 'ಬಿ', 'ಸಿ' ವೃಂದದ ಒಟ್ಟು 270 (ಮೂಲ+ಸ್ಥಳೀಯ) ಹುದ್ದೆಗಳಿಗೆ ನೇರ ನೇಮಕಾತಿಗೆ ಸಂಬಂಧಿಸಿದಂತೆ ಅರ್ಜಿಗಳನ್ನು ಆಹ್ವಾನಿಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಲ್ಲಿ ಅಂತಿಮ ಹಂತದಲ್ಲಿರುತ್ತದೆ.<br>❖ 'ಸಿ' ವೃಂದದ 6 ಚಾಲಕ ಸ್ಥಳೀಯ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಅಭ್ಯರ್ಥಿಗಳಿಗೆ ವಾಹನ ಚಾಲನಾ ಸಾಮರ್ಥ್ಯ ಪರೀಕ್ಷೆ ನಡೆಸಲು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಒಪ್ಪಿದ್ದು, ಮುಂದಿನ ನೇಮಕಾತಿಯ ಕ್ರಮ ಕೈಗೊಳ್ಳಲಾಗುವುದು.<br>❖ 'ಡಿ' ವೃಂದದ ಒಟ್ಟು 60 ಸ್ಥಳೀಯ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಮಂಡಳಿಯಿಂದ online ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲು ಕ್ರಮ ವಹಿಸಲಾಗುತ್ತಿದೆ.</td></tr>
</table>

. . . .2)

| | | |
|---|---|---|
| ಈ | ಜಲಮಂಡಳಿಯಲ್ಲಿ ಸಾರ್ವಜನಿಕರೊಂದಿಗೆ ನೇರವಾಗಿ ವ್ಯವಹರಿಸಲು ಸಂಪರ್ಕಕ್ಕೆ ಬರುವ ಪ್ರಮುಖ ವಿಭಾಗಗಳು ಯಾವುವು; ಅವುಗಳಲ್ಲಿ ಅಧಿಕಾರಿಗಳ ಹುದ್ದೆ ಖಾಲಿ ಇರುವುದು ಮತ್ತು ಅವುಗಳಿಂದ ಜನರ ಸಮಸ್ಯೆಗಳಿಗೆ ಸ್ಪಂದನೆ ಸಿಗದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ? (ಸಂಪೂರ್ಣವಾದ ವಿವರವನ್ನು ನೀಡುವುದು) | ಸಾರ್ವಜನಿಕ ಸಂಪರ್ಕಾಧಿಕಾರಿ, ಹೊಸ ಉಪಕ್ರಮಗಳು ಮತ್ತು ಪಬ್ಲಿಕ್ ಔಟ್‌ರೀಚ್, ನಿರ್ವಹಣಾವಲಯದ ವ್ಯಾಪ್ತಿಯಲ್ಲಿ ಬರುವ ಕಾರ್ಯನಿರ್ವಾಹಕ ಅಭಿಯಂತರರು, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಸೇವಾ ಠಾಣೆಗಳು, ಸಾರ್ವಜನಿಕ ಸಂಪರ್ಕಕ್ಕೆ ಬರುತ್ತವೆ. ಹುದ್ದೆಗಳು ಖಾಲಿ ಇದ್ದರೂ ಸಾರ್ವಜನಿಕರ ಸಮಸ್ಯೆಗಳಿಗೆ ತುರ್ತು ಸ್ಪಂದಿಸಲು ಹಾಲಿ ಇರುವ ಅಧಿಕಾರಿ / ಸಿಬ್ಬಂದಿಗಳಿಂದಲೇ ನಿರ್ವಹಿಸಲಾಗುತ್ತಿದೆ. |

ಸಂಖ್ಯೆ: ನಅಇ 97 ಎಂಎನ್ಐ 2018

(ಡಾ|| ಜಿ. ಪರಮೇಶ್ವರ)
ಉಪ ಮುಖ್ಯಮಂತ್ರಿ